ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ಬಿಡದಿ ಸಮೀಪವಿರುವ ಟೊಯೋಟಾ ಕಿರ್ಲೋಸ್ಕರ್ ಕಂಪನಿ ನೌಕರರ ಮುಷ್ಕರ ಕರಿತು

ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :-

214(208) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರಿನ ಬಿಡದಿ ಸಮೀಪವಿರುವ ಟೊಯೋಟಾ ಕಿರ್ಲೋಸ್ಕರ್ ಮೋಟಾರ್‌ನ ಆಂತರಿಕ ಕಲಹಗಳಿಗೆ ಕಾರಣಗಳೇನು;

(ಆ) ಆಂತರಿಕ ಕಲಹಗಳಿಂದ ಕಾರ್ಮಿಕರು ಬೀದಿ ಪಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ನೌಕರರು ತಮ್ಮ ಬೇಡಿಕೆಗಳಿಗೆ ಒತ್ತಾಯಿಸಿ ಅನಿರ್ದಿಷ್ಟಾವಧಿವರೆಗೆ ಮುಷ್ಕರ ನಡೆಸುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ; ಇದ್ದಲ್ಲಿ, ಇದರ ಪರಿಹಾರಕ್ಕೆ ಕೈಗೊಂಡ ಕ್ರಮಗಳೇನು ?